# ಕರ್ನಾಟಕ ಸರ್ಕಾರ

# ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ನಗರ ವಲಯ ಬೆಳಗಾವಿ.

ವಿಳಾಸ-ವಿ.ವಿ ನಗರ ಬೆಳಗಾವಿ-590019, ಇಮೇಲ-beobelgaumcity@rediffmail.com, ದೂರವಾಣಿ ಸಂ.0831-2451452

ಸಂಖ್ಯೆ: ಇ8/ಶಾಮಾನ/ಪೂಪ್ರಾಶಾ/ಆರ್ಮಿ/ವಿವಿ-68/2023-24 T667 ದಿನಾಂಕ:02/01/2024

**-: ಜ್ಞಾಪನ :-**

ವಿಷಯ : ಆರ್ಮಿ ಪೂರ್ವ ಪ್ರಾಥಮಿಕ ಶಾಲೆ ಕ್ಯಾಂಪ್ ಬೆಳಗಾವಿ, ಈ ಶಾಲೆಗೆ ಮಾನ್ಯತೆ ನವೀಕರಣ ನೀಡುವ ಕುರಿತು.

ಉಲ್ಲೇಖ :
1 ಮಾನ್ಯ ಆಯುಕ್ತರು ಸಾ.ಶಿ.ಇ ಬೆಂಗಳೂರು ಇವರ ಸೂತ್ತ್ರೋಲೆ ಸಂಖ್ಯೆ:ಸಿ8(8) ಶಾ.ಸಿ.ಅ-10/ಕ.ವಿಭಾಗ ಶಾ.ಸಿ.ಅ-10/ಕ.ವಿಭಾಗ-01-02 ದಿ: 17-8-2002.
2 ಮಾನ್ಯ ಸರ್ಕಾರದ ಕಾರ್ಯದರ್ಶಿಗಳು ಶಿಕ್ಷಣ ಇಲಾಖೆ ಬೆ೦ಗಳೂರು ಇವರ ಪತ್ರ ಸ೦:ಇಡಿ: ವಿಧ/2005 ದಿನಾ೦ಕ: 2-11-2006.
3 ಮಾನ್ಯ ಆಯುಕ್ತರು ಸಾ.ಶಿ.ಇ ಬೆಂಗಳೂರು ಇವರ ಸೂತ್ತ್ರೋಲೆ ಸಂಖ್ಯೆ ಸಿ(7)2/ಪ್ರಾಶಿಅ/ದಾಖಲಾತಿ/ 64/ 2013-14 ದಿನಾಂಕ: 11/10/2017.
4 ಮಾನ್ಯ ನಿರ್ದೇಶಕರು, (ಪ್ರಾಥಮಿಕ ಶಿಕ್ಷಣ) ಇವರ ಜ್ಞಾಪನ ಸಂಖ್ಯೆ:ಸಿ7(2)/ಪ್ರಾ.ಶಿ.ಅ/ಇತರೆ 32/2017-18 ದಿನಾಂಕ: 01/02/2018.
5 ಮುಖ್ಯೋಪಾದ್ಯಾಯರು, ಆರ್ಮಿ ಪೂರ್ವ ಪ್ರಾಥಮಿಕ ಶಾಲೆ ಕ್ಯಾಂಪ್ ಬೆಳಗಾವಿ ಇವರ ಪತ್ರ ದಿನಾಂಕ: 29/12/2023.

*****

ಎಮ್.ಎಲ್.ಆರ್.ಸಿ ಬೆಳಗಾವಿ, ಇವರ ಆಡಳಿತ ಮಂಡಳಿಯಿಂದ ನಡೆಯುತ್ತಿರುವ **"ಆರ್ಮಿ ಪೂರ್ವ ಪ್ರಾಥಮಿಕ ಶಾಲೆ ಕ್ಯಾಂಪ್ ಬೆಳಗಾವಿ"** ಈ ಶಾಲೆಗೆ ಮನ್ನಣೆ ಕುರಿತು ಉಲ್ಲೇಖ 5 ರನ್ವಯ ಸಂಬಂದಿಸಿದ ಮುಖ್ಯ ಶಿಕ್ಷಕರು, ಸಲ್ಲಿಸಿದ ಪ್ರಸ್ತಾವನೆಯನ್ನು ಉಲ್ಲೇಖಿತ ಸರಕಾರದ ಆದೇಶ ಹಾಗೂ ಆಯುಕ್ತರ ಸುತ್ತೋಲೆಗಳನ್ವಯ ಪರಿಶೀಲಿಸಲಾಯಿತು. ಶಿಕ್ಷಣ ಕಾಯ್ದೆಯಂತೆ ರಚಿಸಲಾಗಿರುವ 1999 ರ ಮನ್ನಣೆ ನಿಯಮಗಳನ್ವಯ ಈ ಕೆಳಗೆ ಕಾಣಿಸಿದ ಷರತ್ತುಗಳಿಗೊಳಪಟ್ಟು ಕರ್ನಾಟಕ ಶಿಕ್ಷಣ ಮಸೂದೆ ನಿಯಮ 3 ರನ್ವಯ ಶಾಶ್ವತ ಅನುದಾನ ರಹಿತವಾಗಿ ತಾತ್ಕಾಲಿಕವಾಗಿ ಮನ್ನಣೆ ನೀಡಿದೆ.

| ತರಗತಿಗಳು | ವಿಭಾಗ | ಅನುಮೋದಿಸಲ್ಪಟ್ಟ ವಿಭಾಗಗಳು |
|---|---|---|
| ಎಲ್ ಕೆ ಜಿ | 01 | 2022-23 ರಿಂದ 2026-27 ನೇ ಸಾಲಿನ ವರೆಗೆ ಶಾಶ್ವತ ಅನುದಾನ ರಹಿತವಾಗಿ ಮಾನ್ಯತೆ ನವೀಕರಣ ನೀಡಿದೆ. |
| ಯು ಕೆ ಜಿ | 01 | |
| ಒಟ್ಟು | 02 | |

**ಷರತ್ತುಗಳು :**

1 : ಕರ್ನಾಟಕ ಶಿಕ್ಷಣ ಕಾಯ್ದೆ 1983 ರ ನಿಯಮಗಳಿಗೆ ಅನುಗುಣವಾಗಿ ಸುಸಜ್ಜಿತವಾದ ಹಾಗೂ ಸ್ವಂತ ಇಮಾರತಿ., ಆಟದ ಮೈದಾನ.ಪಾಠೋಪಕರಣ ಮತ್ತು ಪೀಠೋಪಕರಣ ಆಡಳಿತ ಮಂಡಳಿಯವರು ಶಾಲೆಗೆ ಪೂರೈಸಿರತಕ್ಕದ್ದು.

2 : ಕಟ್ಟಡ ಸುರಕ್ಷತಾ ಪ್ರಮಾಣ ಪತ್ರ ಅಗ್ನಿ ನೊಂದಕ ಇಲಾಖೆಯಿಂದ ಪ್ರತಿ ವರ್ಷ ಪಡೆದು ಈ ಕಚೇರಿಗೆ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಮುಂದಿನ ಆಗು-ಹೋಗುಗಳಿಗೆ ನೀವೇ ಜಾವಾಬ್ದಾರರಾಗುತ್ತಿರಿ.

3 : ಶಾಲೆಯ ಪ್ರತಿ ಸಾಲಿನ ಲೆಕ್ಕಪತ್ರಗಳನ್ನು ಅಧಿಕೃತ ಚಾರ್ಟರ್ಡ್ ಅಕೌಂಟೆಂಟ್‌ರವರಿಂದ ತಪಾಸಣೆ ಮಾಡಿಸಿಕೊಂಡು ವರದಿ ನೀಡುವುದು.

4 : ವಿಧ್ಯಾರ್ಥಿಗಳ ಶುಲ್ಕವನ್ನು ಶಿಕ್ಷಣ ಕಾಯ್ದೆಯಂತೆ ರಚಿಸಲಾದ ನಿಯಮಗಳಲ್ಲಿ ನಿಗಧಿಪಡಿಸಿದಂತೆ ವಸೂಲು ಮಾಡತಕ್ಕದ್ದು. ಹಾಗೂ ಈ ಬಗ್ಗೆ ಇರುವ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವದು.

5 : ಕರ್ನಾಟಕ ಶಿಕ್ಷಣ ಸಂಸ್ಥೆಗಳ (ವರ್ಗಿಕರಣ,ನಿಯಂತ್ರಣ ಮತ್ತು ಪಠ್ಯಕ್ರಮ) ನಿಯಮಗಳು 1995 ರಲ್ಲಿ ತಿಳಿಸಿರುವ ಎಲ್ಲಾ ಸೌಲಭ್ಯಗಳನ್ನು ಒದಗಿಸುವದು ಹಾಗೂ ಇಲಾಖೆಯಿಂದ ನಿಗಧಿಪಡಿಸಿದ ಪಠ್ಯ ಕ್ರಮವನ್ನೇ ಅನುಸರಿಸತಕ್ಕದ್ದು.

6 : ಶಾಲೆಯಲ್ಲಿ ನಿಗದಿತ ವಿದ್ಯಾರ್ಹತೆ ಹೊಂದಿದ ಅರ್ಹ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವದು.

7 : ವಿದ್ಯಾರ್ಥಿಗಳ ಕನಿಷ್ಟ ಧಾಖಲಾತಿ ಹಾಗೂ ಹಾಜರಾತಿ ಸಂಖ್ಯೆಯನ್ನು ಕಾಯ್ದುಕೊಳ್ಳುವದು.

8 : ಕರ್ನಾಟಕ ಸಮಗ್ರ ಶಿಕ್ಷಣ ಮಸೂದೆ ನಿಯಮಗಳನ್ನು ಹಾಗೂ ಇಲಾಖೆಯಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಆದೇಶಗಳನ್ನು ತಪ್ಪದೇ ಪಾಲಿಸತಕ್ಕದ್ದು.

9 ; ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ 2009 ರ ನಿಯಮಗಳನ್ನು ಕಡ್ಡಾಯವಾಗಿ ಅನುಸರಿಸತಕ್ಕದ್ದು.

10 : ಶಾಲೆಯನ್ನು ಅನುಮತಿ ನೀಡಿದ ಮಾಧ್ಯಮದಲ್ಲಿಯೇ ನಡೆಸುವದು. ಭಾಷಾ ನೀತಿ ಉಲ್ಲಂಘನೆ ಕಂಡು ಬಂದಲ್ಲಿ ಮಾನ್ಯತೆಯನ್ನು ಹಿಂದಕ್ಕೆ ಪಡೆಯಲಾಗುವದು.

11 : ಸರ್ಕಾರದ ನಿಯಮದನ್ವಯ ಕಡ್ಡಾಯವಾಗಿ ಅಗ್ನಿ ಶಾಮಕ ಯಂತ್ರವನ್ನು ಶಾಲೆಗೆ ಅಳವಡಿಸತ್ತಕ್ಕದ್ದು.

12 : ಅಧಿಕೃತ ಇಂಜಿನಿಯರಗಳಿಂದ ಪಡೆದ ಕಟ್ಟಡ ಸುರಕ್ಷತಾ ಪ್ರಮಾಣ ಪತ್ರವನ್ನು ಪ್ರತಿ ವರ್ಷ ಈ ಕಚೇರಿಗೆ ಸಲ್ಲಿಸತಕ್ಕದ್ದು.

13 : ಹೆಚ್ಚಿನ ವರ್ಗಗಳನ್ನು ಹಾಗೂ ವಿಭಾಗಗಳನ್ನು ಇಲಾಖೆಯ ಪೂರ್ವಾನುಮತಿ ಇಲ್ಲದೆ ತೆರೆಯತಕ್ಕದ್ದಲ್ಲ.

14 : ಮಾನ್ಯತೆ ನವೀಕರಣ ಅವಧಿ ಮುಗಿಯುದಕ್ಕಿಂತ ಪೂರ್ವದಲ್ಲಿ ಮಾನ್ಯತೆ ನವೀಕರಣ ಪಡೆದು ಶಾಲೆ ನಡೆಸುವದು. ಮಾನ್ಯತೆ ನವೀಕರಣವಿಲ್ಲದೇ ಯಾವುದೇ ಕಾರಣಕ್ಕೂ ಶಾಲೆ ನಡೆಸಕೂಡದು.

15 : ಇಲಾಖಾ ಅನುಮತಿಯಿಲ್ಲದೇ ಯಾವುದೇ ಕಾರಣಕ್ಕೂ ಶಾಲೆಯನ್ನು ಸ್ಥಳಾಂತರಿಸುವಂತಿಲ್ಲ. ಶಾಲೆಯನ್ನು ಸ್ಥಳಾಂತರಿಸಲು ಇಲಾಖಾ ಅನುಮತಿ ಕಡ್ಡಾಯವಾಗಿ ಪಡೆದುಕೊಳ್ಳುವದು.

16 : ಶಾಲೆಯಲ್ಲಿ ಸಿ ಸಿ ಟಿ ವಿ ಯನ್ನು ಕಡ್ಡಾಯವಾಗಿ ಅಳವಡಿಸತಕ್ಕದ್ದು.

17 : ಶಾಲೆಯಲ್ಲಿ ಮಕ್ಕಳ ಸುರಕ್ಷತೆಯ ಬಗ್ಗೆ ಎಲ್ಲಾ ಕ್ರಮಗಳನ್ನು ಕಡ್ಡಾಯವಾಗಿ ಅಳವಡಿಸುವದು.

18 : ಮಾನ್ಯತೆ/ನೊಂದಣಿ ವೇಳೆ ನೀಡಿರುವ ಮುಚ್ಚಳಿಕೆ ಪ್ರಮಾಣ ಪತ್ರಗಳಲ್ಲಿ ಪ್ರಮಾಣಿಕರಿಸಿರುವ ದಾಖಲೆಗಳನ್ನು 03 ತಿಂಗಳ ಒಳಗಾಗಿ ಹಾಜರಪಡಿಸುವುದು.

19 : ಈ ಮೇಲಿನಂತೆ ವಿಧಿಸಿದ ಷರತ್ತುಗಳನ್ನು ಪಾಲಿಸಿದ ಬಗ್ಗೆ ಅನುಪಾಲನಾ ವರದಿಯನ್ನು 03 ತಿಂಗಳ ಒಳಗಾಗಿ ಈ ಕಚೇರಿಗೆ ಒದಗಿಸತಕ್ಕದ್ದು, ಇದಕ್ಕೆ ತಪ್ಪಿದಲ್ಲಿ ಈ ಆದೇಶವನ್ನು ರದ್ದು ಪಡಿಸುವ ಹಕ್ಕನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.

ಎಲ್ ಎಸ್ ಹಿರೇಮಠ
ಕ್ಷೇತ್ರ ಶಿಕ್ಷಣಾಧಿಕಾರಿಗಳು,
ನಗರ ವಲಯ, ಬೆಳಗಾವಿ.

ಗೆ,

1. **ಅಕೌಂಟಂಟ ಆಫೀಸರ್ ಎಮ್.ಎಲ್.ಆರ್.ಸಿ ( ಆರ್ಮಿ ಪೂರ್ವ ಪ್ರಾಥಮಿಕ ಶಾಲೆ) ಕ್ಯಾಂಪ್ ಬೆಳಗಾವಿ.**

ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

ಉಪನಿರ್ದೇಶಕರ ಕಛೇರಿ , ಸಾರ್ವಜನಿಕ ಶಿಕ್ಷಣ ಇಲಾಖೆ,BELAGAVI ಜಿಲ್ಲೆ

## ಮಾನ್ಯತೆ ನವೀಕರಣ ಪ್ರಮಾಣ ಪತ್ರ

**ಸಂಖ್ಯೆ** : 45872 **ದಿನಾಂಕ** : 13-Dec-2023

**ವಿಷಯ** : ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983 ಯೊಳಗೆ ರಚಿತವಾಗಿರುವ ನಿಯಮಗಳನ್ವಯ ಶಾಲಾ ಮಾನ್ಯತೆಯನ್ನು ನೀಡುವ ಬಗ್ಗೆ.

&&&&

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ARMY PRIMARY SCHOOL THE MARATHA LIGHT INFANTRY REGIMENTAL CENTRE BELGAUM ಆಡಳಿತ ಮಂಡಳಿಯು 29010305957 ಡೈಸ್ ಕೋಡ್ ಸಂಖ್ಯೆ ARMY PRIMARY SCHOOL THE MARATHA LIGHT INFANTRY REGIMENTAL CENTRE, BELGAUM_NEAR GLOBE THEATER CAMP BELGAUM ಶಾಲೆಗೆ [ವಿಳಾಸ], 1_10 ತರಗತಿವರೆಗೆ English ಮಾಧ್ಯಮಕ್ಕೆ ಶಾಲಾ ಮಾನ್ಯತೆಯನ್ನು ನವೀಕರಿಸಲು ಆನ್ಲೈನ್ನಲ್ಲಿ ಸಲ್ಲಿಸಿದ್ದ ಅರ್ಜಿಯಲ್ಲಿನ ದಾಖಲೆಗಳನ್ನು ಇಲಾಖೆಯ ಅಧಿಕಾರಿಗಳು ಪರಿಶೀಲಿಸಿ, ಈ ಕೆಳಕಂಡಂತೆ ಮಾನ್ಯತೆಯನ್ನು ನವೀಕರಿಸಿದೆ.

| ಕ್ರ.ಸಂ. | ವಿವರ | ಆನ್ಲೈನ್ ಅರ್ಜಿ ಸಂಖ್ಯೆ : 45872 |
|---|---|---|
| 1 | ಆಡಳಿತ ಮಂಡಳಿಯ ಹೆಸರು ಮತ್ತು ವಿಳಾಸ | ARMY PRIMARY SCHOOL THE MARATHA LIGHT INFANTRY REGIMENTAL CENTRE BELGAUM |
| 2 | ಶಾಲೆಯ ಹೆಸರು ಮತ್ತು ವಿಳಾಸ | ARMY PRIMARY SCHOOL THE MARATHA LIGHT INFANTRY REGIMENTAL CENTRE, BELGAUM_NEAR GLOBE THEATER CAMP BELGAUM |
| 3 | ಡೈಸ್ ಕೋಡ್ ಸಂಖ್ಯೆ: | 29010305957 |
| 4 | ತರಗತಿ | 1 to 10 |
| 5 | ಮಾಧ್ಯಮ | English |
| 6 | ವಿಭಾಗ | 9 |
| 7 | ಶಾಲಾ ವಿಧ | Pvt. Unaided /Renewal Recognition |
| 8 | ಮಾನ್ಯತೆ ನವೀಕರಿಸಿರುವ ವರ್ಷ | 2023 2024 ಸಾಲಿನಿಂದ 2027 2028 ರವರೆಗೆ |

ಷರತ್ತುಗಳು:

1. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ 2009, ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರ ಅಡಿಯಲ್ಲಿ ಹಾಗೂ ಅದರ ಅಡಿಯಲ್ಲಿ ರಚಿತವಾದ ನಿಯಮಗಳ ಅನುಸಾರ ಶಾಲೆಯನ್ನು ನೋಂದಾಯಿಸಿ, ನೋಂದಾಯಿಸಿದ ತರಗತಿವರೆಗೆ ಮಾನ್ಯತೆಯನ್ನು ನವೀಕರಿಸಲಾಗಿದೆ. ಈ ತರಗತಿಗಳ ಹೊರತಾಗಿ ಹೆಚ್ಚುವರಿ ತರಗತಿಗಳನ್ನು ಮತ್ತು ಹೆಚ್ಚುವರಿ ವಿಭಾಗಗಳನ್ನು ನಡೆಸಲು ಅನುಮತಿ ಇರುವುದಿಲ್ಲ.

2. ಶಾಲೆಯು ಕರ್ನಾಟಕ ಶಿಕ್ಷಣ ಕಾಯ್ದೆ 1983 ಮತ್ತು ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ 2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಕಾರ್ಯನಿರ್ವಹಿಸುವುದು.

3. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ  2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಶೇಕಡಾ 25%ರಷ್ಟು ಸೀಟುಗಳನ್ನು ದುರ್ಬಲ ವರ್ಗದ ಮಕ್ಕಳಿ ಮೀಸಲಿಡುವುದು. ಆರ್.ಟಿ.ಇ ವ್ಯಾಪ್ತಿಗೆ ಒಳಪಡುವ ಶಾಲೆಗಳಿಗೆ ಸರ್ಕಾರವು ಮೀಸಲಿಟ್ಟ ಸೀಟುಗಳನ್ನು ಆರ್.ಟಿ.ಇ ಅಡಿಯಲ್ಲಿ ದಾಖಲಿಸಲು ಅಧಿಕಾರ ಹೊಂದಿರು [ಸರ್ಕಾರವು ಮಕ್ಕಳ ಪೋಷಕರು ವಾಸಿಸುವ ಅಕ್ಕ  ಪಕ್ಕದ ಶಾಲೆಗಳಲ್ಲಿ ದಾಖಲಿಸಲು ಅನುಕೂಲವಾಗುವಂತೆ ನಿಯಮಗಳನ್ನು ರೂಪಿಸಿದ್ದು, ಅದರಂತೆ ಸರ್ಕಾರಿ, ಸರ್ಕಾರದಿಂದ ಅನುದಾನ ಪಡೆದ ಶಿಕ್ಷಣ ಸಂಸ್ಥೆಗಳು ಇದ್ದಲ್ಲಿ ಆ ಶಾಲೆಗೆ ಮಕ್ಕಳನ್ನು ದಾಖಲಿಸಲಾಗುವುದು] ಇಲ್ಲದಿದ್ದ ಪಕ್ಷದಲ್ಲಿ ಖಾಸಗಿ ಶಾಲೆಗಳು ಸರ್ಕಾರದಿಂದ ದಾಖಲಿಸುವ ಮಕ್ಕಳನ್ನು ದಾಖಲಿಸಿಕೊಂಡು ಪ್ರಾಥಮಿಕ ಹಂತದವರೆಗೆ ವಿದ್ಯಾಭ್ಯಾಸ ಮುಂದುವರೆಸಲು ಅವಕಾಶ ನೀಡುವುದು. ಈ ಮಕ್ಕಳನ್ನು ಯಾವುದೇ ತಾರತಮ್ಯವಿಲ್ಲದೆ ವ್ಯಾಸಂಗ ಮುಂದುವರೆಸಲು ಅವಕಾಶ ಕಲ್ಪಿಸುವುದು.

4. ಕಂಡಿಕೆ:3ರಲ್ಲಿ ವಿವರಿಸಿರುವಂತೆ ಆರ್.ಟಿ.ಇ ನಿಯಮದಡಿ ದಾಖಲಾದ ಮಕ್ಕಳ ಶುಲ್ಕಗಳನ್ನು ನಿಯಮಾನುಸಾರ ಸರ್ಕಾರವು ಬಿಡುಗಡೆ ಮಾಡುತ್ತದೆ. ಆದ್ದರಿಂದ ಈ ಮಕ್ಕಳಿಂದ ಯಾವುದೇ ಶುಲ್ಕವನ್ನು ವಸೂಲು ಮಾಡುವುದನ್ನು ನಿರ್ಬಂದಿಸಿದೆ.

5. ಶಾಲೆ ಮತ್ತು ಶಾಲೆಯ ಆಡಳಿತ ಮಂಡಳಿಯು ಯಾವುದೇ ತರವಾದ ಕ್ಯಾಪಿಟೇಷನ್ ಶುಲ್ಕವನ್ನು ಮತ್ತು ಸ್ವಇಚ್ಚೆಯಿಂದ ನೀಡುವ ಡೊನೇಷನ್ಗಳನ್ನು ಪೋಷಕರಿಂದ ದಾಖಲಾತಿ ಸಮಯದಲ್ಲಾಗಲೀ ಅಥವಾ ನಂತರದಲ್ಲಾಗಲೀ ಯಾವುದೇ ರೀತಿಯಾಗಿ ವಸೂಲು ಮಾಡುವುದನ್ನು ನಿರ್ಬಂದಿಸಿದೆ.

6. ಶಾಲೆಯು / ಆಡಳಿತ ಮಂಡಳಿಯು ತಮ್ಮ ಶಾಲೆಯಲ್ಲಿ ಮಕ್ಕಳ ಪೋಷಕರಿಂದ ವ್ಯಾಸಂಗ ಶುಲ್ಕವಾಗಿ ವಸೂಲು ಮಾಡುವ ಶುಲ್ಕದ ಮಾಹಿತಿಯನ್ನು ರಾಜ್ಯ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ:31:ಪಿಜಿಸಿ:2019, ದಿನಾಂಕ:27.07.2019ರನ್ವಯ ಮಾಹಿತಿಗಳನ್ನು ಇಲಾಖಾ ವೆಬ್ಸೈಟ್ನಲ್ಲಿ ಹಾಗೂ ಶಾಲಾ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ನಿಗದಿತ ಶುಲ್ಕಕ್ಕಿಂತ ಹೆಚ್ಚುವರಿ ಶುಲ್ಕವನ್ನು ವಸೂಲು ಮಾಡತಕ್ಕದ್ದಲ್ಲ.

7. ಶಾಲೆಯು / ಆಡಳಿತ ಮಂಡಳಿಯು ವಿದ್ಯಾರ್ಥಿಗಳನ್ನು ಸರ್ಕಾರವು ನಿಗದಿಪಡಿಸಿದೆ ಅವಧಿಯಲ್ಲಿಯೇ ದಾಖಲಾತಿ ಮಾಡಿಕೊಳ್ಳುವುದು.

8. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡ ಅಂಶಗಳ ವಿರುದ್ಧ ದಾಖಲಾತಿಯನ್ನು ನಿರಾಕರಿಸುವಂತಿಲ್ಲ.

(i) ವಯಸ್ಸಿನ ಪುರಾವೆ ಕೊರತೆಯಿಂದಾಗಿ.

(ii) ಜಾತಿ, ಧರ್ಮ, ಹುಟ್ಟಿದ ಸ್ಥಳ, ಭಾಷೆಯ ಆಧಾರದ ಮೇಲೆ.

(iii) ಪ್ರವೇಶದ ವಿಸ್ತøತ ಅವಧಿಯ ನಂತರ ಪ್ರವೇಶವನ್ನು ಕೋರಿದರೆ.

9. ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು, ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಎಲ್ಲಾ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವುದು. [ಸಂಬಂಧಿಸಿದ ಪ್ರಾಧಿಕಾರಗಳಿಂದ ಅಗ್ನಿ ಸುರಕ್ಷತೆ ಮತ್ತು ಕಟ್ಟಡ ಸುರಕ್ಷತಾ ಪ್ರಮಾಣ ಪತ್ರ ಹಾಗೂ K.S.C.P.C.R ಮತ್ತು N.C.P.C.R ಪ್ರಕಾರ ಮಕ್ಕಳ ಕಲಿಕೆಯ ಸುರಕ್ಷತೆ].

10. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡಂತೆ

(i) ಪ್ರವೇಶ ಪಡೆದ ಯಾವುದೇ ಮಗುವನ್ನು ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ ಮತ್ತು ಮಾಧ್ಯಮ ಶಿಕ್ಷಣವನ್ನು ಪೂರ್ಣಗೊಳಿಸುವವರೆಗೆ ಯಾವುದೇ ತರಗತಿಯಲ್ಲಿ ಹಿಡಿದಿಟ್ಟುಕೊಳ್ಳಬಾರದು ಅಥವಾ ಶಾಲೆಯಿಂದ ಹೊರಹಾಕಬಾರದು.

(ii) ಯಾವುದೇ ಮಗುವನ್ನು ದೈಹಿಕ ಅಥವಾ ಮಾನಸಿಕವಾಗಿ ಕಿರುಕುಳಕ್ಕೆ ಒಳಪಡಿಸಬಾರದು.

(iii) ಪ್ರಾಥಮಿಕ ಶಿಕ್ಷಣ ಪೂರ್ಣಗೊಳ್ಳುವವರೆಗೆ ಯಾವುದೇ ಮಗು ಯಾವುದೇ ಬೋರ್ಡ್ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಅಗತ್ಯವಿಲ್ಲ.

(iv) ಪ್ರಾಥಮಿಕ ಶಿಕ್ಷಣವನ್ನು ಪೂರ್ಣಗೊಳಿಸುವ ಪ್ರತಿ ಮಗುವಿಗೆ ಆರ್.ಟಿ.ಇ ನಿಯಮ  21 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಡಿಯಲ್ಲಿ ನಿಗದಿಪಡಿಸಿದಂತೆ ಪ್ರಮಾಣ ಪತ್ರವನ್ನು ನೀಡಲಾಗುತ್ತದೆ.

(v) ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಬಂಧನೆಗಳ ಪ್ರಕಾರ ಶಾಲೆಯು ವಿಶೇಷ ಅಗತ್ಯತೆಗಳು / ವಿಶೇಷ ಮಕ್ಕಳನ್ನು ಹೊಂದಿರುವ ಮಕ್ಕಳನ್ನು ಸಹ ಸೇರಿಸಿಕೊಳ್ಳಬೇಕು.

(vi) ನೇಮಕಗೊಂಡ ಶಿಕ್ಷಕರು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಹಾಗೂ ಸರ್ಕಾರಿ ಆದೇಶಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ನಿಗದಿಪಡಿಸಿದಂತೆ ಕನಿಷ್ಠ ವಿದ್ಯಾರ್ಹತೆಗಳನ್ನು ಹೊಂದಿರತಕ್ಕದ್ದು.

(vii) ಶಿಕ್ಷಕರಿಗೆ ಪಾವತಿಸಬೇಕಾದ ವೇತನ ಮತ್ತು ಭತ್ಯೆಗಳು ಹಾಗೂ ಸೇವಾ ನಿಯಮಗಳು ಮತ್ತು ಷರತ್ತುಗಳು ರಾಜ್ಯ ಸರ್ಕಾರವು ಸೂಚಿಸಿದಂತೆ ಇರುತ್ತದೆ. ಮತ್ತು ಸರ್ಕಾರಿ ಅಧಿಸೂಚನೆ [ಭವಿಷ್ಯ ನಿಧಿ (Pಈ)] ಮತ್ತು ಪಾವತಿಸಬೇಕಾದ ಬ್ಯಾಂಕ್ ಮತ್ತು ಇತರೆ ವೇತನಗಳ ಮೂಲಕ ಶಿಕ್ಷಕರಿಗೆ ವೇತನವನ್ನು ಪಾವತಿಸಲಾಗುತ್ತದೆ. ಮತ್ತು ಉದ್ಯೋಗಿ ರಾಜ್ಯ ವಿಮೆಗೆ (ಇSI) ಒಳಪಡಿಸುತ್ತದೆ.

(viii) ಶಿಕ್ಷಕರು ಕಾಯ್ದೆ ಸೆಕ್ಷನ್  24[1] ಮತ್ತು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಯಮ  17ರ ಅಡಿಯಲ್ಲಿ ಸೂಚಿಸಲಾದ ಕರ್ತವ್ಯಗಳನ್ನು ನಿರ್ವಹಿಸುತ್ತಾರೆ ಮತ್ತು ಮೇಲ್ವಿಚಾರಣೆ ಪರಿಗಣನೆಗಳಿಗಾಗಿ ಖಾಸಗಿ ಟ್ಯೂಷನ್ಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವುದಿಲ್ಲ.

-ಶಾಲೆಯು ಸಂಯೋಜಿತವಾಗಿರುವ ಶೈಕ್ಷಣಿಕ ರಾಜ್ಯ ಪಠ್ಯಕ್ರಮ ಮತ್ತು ರಾಜ್ಯ ಪಠ್ಯ ಪುಸ್ತಕಗಳನ್ನು ಅನುಸರಿಸುವುದು.

ಕರ್ನಾಟಕ ಶಿಕ್ಷಣ ಕಾಯ್ದೆ ಸೆಕ್ಷನ್ 19ರಲ್ಲಿ ನಿರ್ದಿಷ್ಟಪಡಿಸಿದಂತೆ ಶಾಲೆಯು ನಿಯಮಗಳು ಮತ್ತು ಮಾನದಂಡಗಳನ್ನು ನಿರ್ವಹಿಸುವುದು. ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಲ್ಲಿ ಸೂಚಿಸಿರುವಂತೆ ಇಲಾಖಾ ಸಿಬ್ಬಂದಿಗಳನ್ನು ನೇಮಿಸುವುದು.

13. ಶಾಲೆಗೆ ಸಂಬಂಧಿಸಿದ ಶಾಲಾ ಕಟ್ಟಡಗಳು ಮತ್ತು ಇತರೆ ಮೂಲಭೂತ ಸೌಕರ್ಯಗಳನ್ನು ಹಗಲು ಅಥವಾ ರಾತ್ರಿಯಲ್ಲಿ ಯಾವುದೇ ವಾಣಿಜ್ಯ ಚಟುವಟಿಕೆಗಳಿಗೆ ಅಥವಾ ರಾಜಕೀಯ ಮತ್ತು ಶೈಕ್ಷಣಿಕೇತರ ಚಟುವಟಿಕೆಗಳಿಗೆ ನೀಡಬಾರದು.

14. ಶಾಲೆಯನ್ನು ಯಾವುದೇ ವ್ಯಕ್ತಿ ಅಥವಾ ಗುಂಪು ಅಥವಾ ಸಂಘದ ಲಾಭಕ್ಕಾಗಿ ನಡೆಸಬಾರದು.

15. ಶಾಲೆಯನ್ನು ಚಾರ್ಟೆಡ್ ಅಕೌಂಟೆಂಟ್ನಿಂದ ಆಡಿಟ್ ಮಾಡಿಸಿ, ಪ್ರತಿಯನ್ನು ಪ್ರತಿ ವರ್ಷ ಜೂನ್ ಅಂತ್ಯದೊಳಗೆ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಲ್ಲಿಸುವುದು.

16. ಸರ್ಕಾರಿ ಅಧಿಸೂಚನೆಯ [ಕನ್ನಡ ಭಾಷಾ ನೀತಿ 2016] ಪ್ರಕಾರ ಶಾಲೆಯು ಭಾಷಾ ನೀತಿಯನ್ನು ಅನುಸರಿಸುವುದು.

17. ಆರ್.ಟಿ.ಇ ಕಾಯ್ದೆ ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಆಡಳಿತ ಮಂಡಳಿ ಮತ್ತು ಶಿಕ್ಷಕರುಗಳು ಕಾರ್ಯನಿರ್ವಹಿಸುವುದು.

18. ಶಾಲೆ / ಆಡಳಿತ ಮಂಡಳಿಯು ಸರ್ಕಾರ ಮತ್ತು ಇಲಾಖೆಯ ನಿಯಮ ಮತ್ತು ನಿರ್ದೇಶನವನ್ನ ತಪ್ಪದೇ ಪಾಲಿಸುವುದು.

19. ಪ್ರತಿ ವರ್ಷದ ಮಾರ್ಚ್ ಅಂತ್ಯದ ಒಳಗಾಗಿ ಎಸ್.ಎ.ಟಿ.ಎಸ್ನಲ್ಲಿ ಶಾಲಾ ಮಾಹಿತಿಯನ್ನು ನಿಯಮನುಸಾರ ಅಪ್ಡೇಟ್ ಮಾಡುವುದನ್ನು ಕಡ್ಡಾಯಗೊಳಿಸಿದೆ.

20. ಮೇಲಿನ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಆರ್.ಟಿ.ಇ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರಡಿಯಲ್ಲಿ ರಚಿತವಾಗಿರುವ ನಿಯಮಗಳ ಅನುಸಾರ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಲಾಗುವುದು.

21. ಶಾಲಾ ಮಾನ್ಯತೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಆಡಳಿತ ಮಂಡಳಿಯು ಆನ್ ಲೈನ್ ನಲ್ಲಿ ಸಲ್ಲಿಸಿದ ಅರ್ಜಿಯಲ್ಲಿನ ಸಂಪೂರ್ಣ ದಾಖಲೆ/ ಮಾಹಿತಿಗಳನ್ನು ಇಲಾಖಾ ವೆಬ್ ಸೈಟ್ ನಲ್ಲಿ ಸಾರ್ವಜನಿಕವಾಗಿ ವೀಕ್ಷಿಸಲು ಅನುವುಮಾಡಿಕೊಡಲಾಗುವುದು.

22. ಮೇಲಿನ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಆರ್.ಟಿ.ಇ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರಡಿಯಲ್ಲಿ ರಚಿತವಾಗಿರುವ ನಿಯಮಗಳ ಅನುಸಾರ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಲಾಗುವುದು.

ಉಪನಿರ್ದೇಶಕರು(ಆಡಳಿತ)

ಸಾರ್ವಜನಿಕ ಶಿಕ್ಷಣ ಇಲಾಖೆ

BELAGAVI (2901) ಜಿಲ್ಲೆ

ಗೆ,

1. ಸಂಬಂಧಿಸಿದ ಆಡಳಿತ ಮಂಡಳಿ ARMY PRIMARY SCHOOL THE MARATHA LIGHT INFANTRY REGIMENTAL CENTRE BELGAUM

2. ಮುಖ್ಯ ಶಿಕ್ಷಕರು, /NEAR GLOBE THEATER CAMP BELGAUM/ARMY PRIMARY SCHOOL THE MARATHA LIGHT INFANTRY REGIMENTAL CENTRE, BELGAUMಶಾಲೆ ಮತ್ತು ವಿಳಾಸ

3. ಕ್ಷೇತ್ರ ಶಿಕ್ಷಣಾಧಿಕಾರಿಗಳು ,BELAGAVI CITY (290103) ತಾಲ್ಲೂಕು/ವಲಯ BELAGAVI (2901) ಜಿಲ್ಲೆ.

4. ಕಛೇರಿ ಪ್ರತಿ.